ಎಂವಿಸಿ 427/2019 ಪಿಡಬ್ಲ್ಯೂ 1 ರಾಣಿಯಮ್ಮ

ದಿನಾಂಕ 12.03.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ ಎನ್.ಎಂ.ಎಂ. ವಕೀಲರಿಂದಃ

(ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.)

ಪೊಲೀಸರು ಸಲ್ಲಿಸಿದ ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ 1 ಎಂದು ಗುರುತಿಸಲಾಯಿತು. ದೂರಿನ ದೃಢೀಕೃತ ನಕಲನ್ನು ನಿಪಿ 2 ಎಂದು ಗುರುತಿಸಲಾಯಿತು. ಸ್ಥಳ ಮಹಜರ್ ನ ದೃಢೀಕೃತ ನಕಲನ್ನು ನಿಪಿ 3 ಎಂದು ಗುರುತಿಸಲಾಯಿತು. 2 ಐಎಂವಿ ವರದಿಯ ದೃಢೀಕೃತ ನಕಲುಗಳನ್ನು ನಿಪಿ 4 ಮತ್ತು 5 ಎಂದು ಗುರುತಿಸಲಾಯಿತು. ಗಾಯದ ಪ್ರಮಾಣ ಪತ್ರವನ್ನು ನಿಪಿ 6 ಎಂದು ಗುರುತಿಸಲಾಯಿತು. ಚಾರ್ಜ್ ಶೀಟ್ ನ ದೃಢೀಕೃತ ನಕಲನ್ನು ನಿಪಿ 7 ಎಂದು ಗುರುತಿಸಲಾಯಿತು. ನನ್ನ ಆಧಾರ್ ಕಾರ್ಡ್ ನ ದೃಢೀಕೃತ ನಕಲನ್ನು ನಿಪಿ 8 ಎಂದು ಗುರುತಿಸಲಾಯಿತು. ಒಟ್ಟು 125 ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ 9 ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೇಳಿರುವ ಪರಿಹಾರವನ್ನು ಮಂಜೂರು ಮಾಡಬೇಕೆಂದು ಪ್ರಾರ್ಥಿಸುತ್ತೇನೆ.

ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ಕೋರಿಕೆ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಈ ದಿನ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

ಅಪರ ಹಿರಿಯ ಸಿಜೆ ಮತ್ತು ಎಂಎಸಿಟಿ ಶ್ರೀರಂಗಪಟ್ಟಣ.